ಅ) ನಿರ್ಮಾಣವನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಬಸವರಾಜ್ ಹೆಚ್. ಪಾಟೀಲ್ (ಇಂಧನ ರಾಜ್ಯ ಸಚಿವರು):

ಅ) ಈ ಸಬ್ ಸ್ಟೇಷನ್ ನಿರ್ಮಾಣಕ್ಕೆ ಶಿಲಾನ್ಯಾಸವನ್ನು ಮಾಡಿರುವುದಿಲ್ಲ.

ಆ) ಈ ವಿದ್ಯುತ್ ವಿತರಣಾ ಕೇಂದ್ರದ ನಿರ್ಮಾಣ ಕಾರ್ಯವನ್ನು 'ಟರ್ನ್‌ಕೀ ಆಧಾರದ ಮೇಲೆ ವಹಿಸಿಕೊಡುವ ಪ್ರಕ್ರಿಯೆ ಈಗ ಪ್ರಗತಿಯಲ್ಲಿದ್ದು ನಿರ್ಮಾಣ ಕಾರ್ಯವನ್ನು 'ಟರ್ನ್‌ಕೀ' ಗುತ್ತಿಗೆದಾರರಿಗೆ ವಹಿಸಿಕೊಟ್ಟ ನಂತರ, ಒಂದು ವರ್ಷದ ಅವಧಿಯಲ್ಲಿ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ.

ಬೆಂಗಳೂರು ನಗರದಲ್ಲಿ ಮಳೆ ನೀರನ್ನು ಸಂಗ್ರಹಿಸುವುದನ್ನು ಕಡ್ಡಾಯ ಗೊಳಿಸುವುದು

302 (2208) - ಶ್ರೀ ವಿ. ಸೋಮಣ್ಣ (ಬಿನ್ನಿಪೇಟೆ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ವ್ಯರ್ಥವಾಗಿ ಹರಿದು ಹೋಗುತ್ತಿರುವ ಮಳೆ ನೀರನ್ನು ಸಂಗ್ರಹಿಸುವುದನ್ನು ಹೊಸದಾಗಿ ಕಟ್ಟಡ ನಿರ್ಮಿಸುವ ಮಾಲೀಕರಿಗೆ ಕಡ್ಡಾಯಗೊಳಿಸಲು ಸರ್ಕಾರ ನಿರ್ಧರಿಸಿದೆಯೇ?

ಆ) ಇದಕ್ಕಾಗಿ ಬೆಂಗಳೂರು ಮಹಾನಗರ ಪಾಲಿಕೆ ತನ್ನ ಬೈಲಾವನ್ನು ತಿದ್ದುಪಡಿ ಮಾಡಿ ನಕ್ಷೆ ಮಂಜೂರು ಮಾಡಬೇಕಾದರೆ ಈ ಮಳೆ ನೀರು ಸಂಗ್ರಹಣೆಯನ್ನು ಅಳವಡಿಸಿಕೊಳ್ಳಬೇಕೆಂದು ನಿರ್ಬಂಧನೆ ವಿಧಿಸಬೇಕೆಂದು ಸರ್ಕಾರ ಆದೇಶ ನೀಡಿದೆಯೇ?

ಇ) ಹಾಗಿದ್ದಲ್ಲಿ, ಬೆಂಗಳೂರು ಮಹಾನಗರ ಪಾಲಿಕೆ ತನ್ನ ಬೈಲಾಗೆ ಸೂಕ್ತ ತಿದ್ದುಪಡಿ ಮಾಡಿ ಸರ್ಕಾರದ ಆದೇಶವನ್ನು ಪಾಲಿಸಿದೆಯೇ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು):

ಅ) ಹೌದು.

ಆ) ಹೌದು.

ಇ) ತಿದ್ದುಪಡಿ ಮಾಡಿದ ಕರಡು ಬೈಲಾಗಳನ್ನು ಪ್ರಕಟಿಸುತ್ತಿದೆ.

ಕೊರಟಗೆರೆ ತಾಲ್ಲೂಕಿನಲ್ಲಿ ವಿದ್ಯುತ್ ಪೂರೈಕೆ

303 (2525) - ಶ್ರೀ ಚನ್ನಗಪ್ಪ .ಸಿ. (ಕೊರಟಗೆರೆ) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆ ಕೊರಟಗೆರೆ ತಾಲ್ಲೂಕಿನ ವ್ಯಾಪ್ತಿಯಲ್ಲಿ ಟಿ.ಸಿಗಳು ಇಲ್ಲದೇ ರೈತಾಪಿ ವರ್ಗದವರ ಜಮೀನುಗಳಿಗೆ ನೀರು ಸಹ ಸರಬರಾಜು ಆಗದೇ ಬೆಳೆಗಳು ನಾಶವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಭಾಗದಲ್ಲಿ ಮತ್ತು ಸರಿಯಾದ ಪ್ರಮಾಣದಲ್ಲಿ ವಿದ್ಯುತ್ ಪೂರೈಕೆ ಮಾಡಿ ನಾಗರಿಕರಿಗೆ ಅನುಕೂಲ ಮಾಡಿಕೊಡುವುದು ಯಾವಾಗ? ಈ ಭಾಗದ ರೈತರ ಜಮೀನುಗಳಿಗೆ ಹಾಗೂ ಕುಡಿಯುವ ನೀರು ಸರಬರಾಜಿಗಾಗಿ ವಿದ್ಯುತ್ ಪೂರೈಕೆಗೆ ತೊಂದರೆಯಾಗದಂತೆ ಅನುಕೂಲ ಮಾಡಿಕೊಡುವುದು ಯಾವಾಗ?